**ಕರ್ನಾಟಕ ವಿಧಾನ ಪರಿಷತ್ತು**

1. ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 518
2. ಸದಸ್ಯರ ಹೆಸರು : ಶ್ರೀ ಕೆ. ವಿ. ನಾರಾಯಣಸ್ವಾಮಿ (ವಿಧಾನಸಭೆಯಿಂದ ಚುನಾಯಿತರಾದವರು)
3. ಉತ್ತರಿಸಬೇಕಾದ ದಿನಾಂಕ : 13.12.2018
4. ಉತ್ತರಿಸುವ ಸಚಿವರು : ಮುಖ್ಯಮಂತ್ರಿ

| ಪ್ರಶ್ನೆ | ಉತ್ತರ |
|---|---|
| ಅ) ಸರ್ಕಾರಿ ನೌಕರರು ಕಂಪ್ಯೂಟರ್ ಸಾಕ್ಷರತಾ ಪರೀಕ್ಷೆಯಲ್ಲಿ ಉತ್ತೀರ್ಣರಾಗಬೇಕಾಗಿರುವುದು ಕಡ್ಡಾಯವೇ; | ಕರ್ನಾಟಕ ಸಿವಿಲ್ ಸೇವಾ (ಕಂಪ್ಯೂಟರ್ ಸಾಕ್ಷರತಾ ಪರೀಕ್ಷೆ) ನಿಯಮಗಳು, 2012ರನ್ವಯ ಪ್ರತಿಯೊಬ್ಬ ಸರ್ಕಾರಿ ನೌಕರನು ಕಂಪ್ಯೂಟರ್ ಸಾಕ್ಷರತಾ ಪರೀಕ್ಷೆಯಲ್ಲಿ ನಿಗದಿತ ಅಂಕಗಳನ್ನು ಗಳಿಸಿ ಉತ್ತೀರ್ಣರಾಗುವುದು ಕಡ್ಡಾಯವಾಗಿರುತ್ತದೆ. ಆದರೆ, ಸರ್ಕಾರವು ಅಧಿಸೂಚಿಸಿರುವ ಕೆಲವು ಹುದ್ದೆಗಳಿಗೆ ಹಾಗೂ ಕಾಲಕಾಲಕ್ಕೆ ಅಧಿಸೂಚಿಸಬಹುದಾದ ಇತರೆ ಹುದ್ದೆಗಳಿಗೆ ಕಂಪ್ಯೂಟರ್ ಸಾಕ್ಷರತಾ ಪರೀಕ್ಷೆಯಿಂದ ವಿನಾಯಿತಿ ನೀಡಲಾಗಿದೆ. ಅಲ್ಲದೇ, ಕಂಪ್ಯೂಟರ್ ಸಾಕ್ಷರತಾ ನಿಯಮಗಳು ಪ್ರಾರಂಭವಾದ ದಿನಾಂಕವಾದ 22.03.2012ರಂದು 50 ವರ್ಷ ವಯಸ್ಸಾಗಿರುವ ಸರ್ಕಾರಿ ನೌಕರರಿಗೆ ಸದರಿ ಪರೀಕ್ಷೆಯು ಕಡ್ಡಾಯವಾಗಿರುವುದಿಲ್ಲ. |
| ಆ) ಹಾಗಿದ್ದಲ್ಲಿ, ಇಲ್ಲಿಯವರೆಗೂ ಸದರಿ ಪರೀಕ್ಷೆಯಲ್ಲಿ ಉತ್ತೀರ್ಣರಾದ ನೌಕರರ ಸಂಖ್ಯೆ ಎಷ್ಟು; | ಇಲ್ಲಿಯವರೆಗೂ ಸದರಿ ಪರೀಕ್ಷೆಯಲ್ಲಿ ಉತ್ತೀರ್ಣರಾದ ನೌಕರರ ಸಂಖ್ಯೆ **: 1,11,234** |
| ಇ) ಸದರಿ ಪರೀಕ್ಷೆಯಲ್ಲಿ ಉತ್ತೀರ್ಣರಾದವರಿಗೆ ಪ್ರೋತ್ಸಾಹ ಧನ ನೀಡಲು ಸರ್ಕಾರ ನಿರ್ಧರಿಸಿದೆಯೇ: | ಹೌದು |
| ಈ) ನಿರ್ಧರಿಸಿದ್ದಲ್ಲಿ, ಇಲ್ಲಿಯವರೆಗೂ ಎಷ್ಟು ನೌಕರರಿಗೆ ಪ್ರೋತ್ಸಾಹಧನ ನೀಡಲಾಗಿದೆ (ವರ್ಷಾವಾರು ಮಾಹಿತಿ ನೀಡುವುದು) | ಕಂಪ್ಯೂಟರ್ ಸಾಕ್ಷರತಾ ಪರೀಕ್ಷೆಯಲ್ಲಿ ಉತ್ತೀರ್ಣರಾದ ಸರ್ಕಾರಿ ನೌಕರರಿಗೆ ಸರ್ಕಾರದಿಂದ ನೀಡಲ್ಪಡುವ ಪ್ರಮಾಣ ಪತ್ರದ ನಮೂನೆಯನ್ನು ಅಂತಿಮಗೊಳಿಸುವ ಬಗ್ಗೆ ಪರಿಶೀಲಿಸಲಾಗುತ್ತಿದ್ದು, ಅದು ಇತ್ಯರ್ಥವಾದ ನಂತರ ರೂ.5,000/-ಗಳ ಪ್ರೋತ್ಸಾಹ ಧನವನ್ನು ನೀಡಲು ಕ್ರಮ ಕೈಗೊಳ್ಳಲಾಗುವುದು. |
| ಉ) ನೀಡದೇ ಇದ್ದಲ್ಲಿ, ನೀಡದಿರಲು ಕಾರಣಗಳು ಏನು: ಪ್ರೋತ್ಸಾಹಧನ ನೀಡಲು ಸರ್ಕಾರ ಕೈಗೊಂಡ ಕ್ರಮಗಳೇನು? | |

ಸಂಖ್ಯೆ: ಸಿಆಸುಇ 246 ಸೇವನೆ 2018

(ಹೆಚ್.ಡಿ.ಕುಮಾರಸ್ವಾಮಿ)
ಮುಖ್ಯಮಂತ್ರಿ